# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 376 |
| 2. | ಮಾನ್ಯ ಸದಸ್ಯರ ಹೆಸರು | : | ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3. | ಉತ್ತರಿಸಬೇಕಾದ ದಿನಾಂಕ | : | 10.03.2025 |
| 4. | ಉತ್ತರಿಸುವ ಸಚಿವರು | : | ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; ಇದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು: | ರಾಜ್ಯದ ಪ್ರತಿ ಜಿಲ್ಲೆಗೊಂದು ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಬೇಕೆಂಬುದು ಸರ್ಕಾರದ ನೀತಿಯಾಗಿರುತ್ತದೆ. |
| (ಆ) | ಪ್ರಸ್ತಾವನೆ ಇಲ್ಲವಾದಲ್ಲಿ, ಸರ್ಕಾರಿ ವೈದ್ಯಕೀಯ ಕಾಲೇಜು ತೆರೆಯಲು ಇರುವ ಸಮಸ್ಯೆಗಳೇನು: | ರಾಜ್ಯ ಸರ್ಕಾರದ ವತಿಯಿಂದ ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಅಂದಾಜು ರೂ.610.00ಕೋಟಿಗಳ ಅನಾವರ್ತಕ ವೆಚ್ಚ ಹಾಗೂ 60.00ಕೋಟಿಗಳ ಆವರ್ತಕ ವೆಚ್ಚ ಅವಶ್ಯಕತೆ ಇರುತ್ತದೆ. ಅದರಂತೆ, ಅನುದಾನದ ಲಭ್ಯತೆಯನ್ನು ಆಧರಿಸಿ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಹೊಂದಿರದ ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಪರಿಶೀಲಿಸಲಾಗುವುದು. |
| (ಇ) | ಪುತ್ತೂರಿನಲ್ಲಿ ಸರ್ಕಾರಿ ಕಾಲೇಜು ತೆರೆಯುವಂತೆ ಬೇಡಿಕೆ ಬಂದಿದೆಯೇ; | ಪುತ್ತೂರಿನಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ತೆರೆಯುವಂತೆ ಬೇಡಿಕೆ ಸ್ವೀಕೃತವಾಗಿರುತ್ತವೆ.<br>ಪ್ರಸ್ತುತದಲ್ಲಿ ರಾಜ್ಯ ಸರ್ಕಾರದ ವತಿಯಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಹಂತದಲ್ಲಿ ಬಾಕಿ ಇರುವುದಿಲ್ಲ.<br>ವೈದ್ಯಕೀಯ ಕಾಲೇಜುಗಳು ಇಲ್ಲದ ಜಿಲ್ಲೆಗಳಲ್ಲಿ ಪಿಪಿಪಿ ಮಾದರಿಯಲ್ಲಿ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸುವ ಬಗ್ಗೆ ಪೂರ್ವಭಾವಿ ಸಭೆಯನ್ನು ನಡೆಸಲಾಗಿದೆ. |
| (ಈ) | ಪುತ್ತೂರಿನಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜಿಗೆ ಜಾಗ ಗುರುತಿಸಲಾಗಿದೆಯೇ; ಗುರುತಿಸಿದ್ದರೆ, ಯಾವ ಜಾಗ, ಮತ್ತು ಎಷ್ಟು ಎಕರೆ ಜಮೀನು ಮೀಸಲಿಡಲಾಗಿದೆ? | ಸದರಿ ಪ್ರಸ್ತಾವನೆಗೆ ಸಂಬಂಧಿಸಿದಂತೆ ಯಾವುದೇ ಜಾಗವನ್ನು ಗುರುತಿಸಿರುವುದಿಲ್ಲ. |

**ಸಂಖ್ಯೆ:** ಎಂಇಡಿ 114 ಎಂಎಂಸಿ 2025

**(ಡಾ. ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು.